<u>1ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ</u>
<u>ಬೆಂಗಳೂರು ನಗರ</u>
ಸಿ.ಸಿ. ನಂ. 31825-2018

ಸಿಡಬ್ಲೂ - 3ಪಿಡಬ್ಲೂ-5

| | | |
|---|---|---|
| ಸಾಕ್ಷಿದಾರರ ಹೆಸರು | : | ಪ್ರದೀಪ |
| ತಂದೆಯ ಹೆಸರು | : | ಅಪ್ಪಾಜಿಗೌಡ |
| ವಯಸ್ಸು | : | 40 ವರ್ಷ |
| ಕೆಲಸ | : | ಚಾಲಕ |
| ವಾಸ | : | ಬೆಂಗಳೂರು |

<u>ಸಾಕ್ಷಿಯನ್ನು ದಿನಾಂಕಃ 01-09-2025 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.</u>

<u>ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದಃ</u>

ನನಗೆ ಚಾಸಾ 1 ಮತ್ತು 2 ರವರು ಗೊತ್ತು. ಸಾಕ್ಷಿಯು ನಿಪಿ. 3 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 3ಬಿ ಎಂದು ಗುರುತಿಸಲಾಯಿತು. ದಿ. 27-10-2017 ರಂದು ನಾವು ವಾಸಿಸುತ್ತಿರುವ ಕಟ್ಟಡದ ಬಳಿ ಮನೆಯ ಕಿಟಕಿ ಗ್ಲಾಸ್ ಒಡೆದು ಹೋದ ವಿಚಾರದಲ್ಲಿ ನಾನು ಮತ್ತು 2-3 ಜನರು ಸಹಿ ಮಾಡಿರುತ್ತೇವೆ. ಪೋಲೀಸರು ಗ್ಲಾಸ್ ಪೀಸ್ ನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿದಾರರು ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ, ಹಿ.ಸ.ಸಾ.ಅ. ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಹಿ.ಸ.ಸಾ.ಅ. ರವರಿಂದಃ</u>

ಸಾಕ್ಷಿಯು ಗಾಜಿನ ಚೂರುಗಳನ್ನು ನೋಡಿ ಗುರುತಿಸಿರುತ್ತಾರೆ. ಇಟ್ಟಿಗೆ ಚೂರು ಮತ್ತು ಡಿವಿಡಿಯನ್ನು ತೆಗೆದುಕೊಂಡು ಹೋಗಿರುತ್ತಾರೆ ಎಂದರೆ ಸಾಕ್ಷಿಯು ನಾನು ಗಾಜಿನ ಚೂರುಗಳನ್ನು ಮಾತ್ರ ತೆಗೆದುಕೊಂಡು ಹೋಗಿರುವುದನ್ನು ನೋಡಿರುತ್ತೇನೆ ಎಂದು ನುಡಿಯುತ್ತಾರೆ. ಮು. ಮಾ2 ಮತ್ತು 3 ನ್ನು ಅಮಾನತ್ತು ಪಡಿಸಿಕೊಂಡ ಬಗ್ಗೆ ನನಗೆ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ</u>

ಚಾಸಾ 1 ರವರ ಮನೆಯಲ್ಲಿ ನಾನು ವಾಸವಾಗಿರುತ್ತೇನೆ. ಪೋಲೀಸರು ಸ್ಥಳದಲ್ಲಿ ಗಾಜಿನ ಚೂರುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಪೋಲೀಸರು ಸ್ಥಳಕ್ಕೆ ಬಂದು ಮಹಜರ್ ನ್ನು ಬರೆದಿಲ್ಲ ಎಂದರೆ ಸರಿಯಲ್ಲ. ಚಾಸಾ 1 ರವರು ಮನೆಯ ಮಾಲೀಕರಾಗಿರುವುದಂರಿದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲ</u>

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಅ. ಮು. ನ್ಯಾ.ದಂ. ನ್ಯಾ